# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 17/07/2021 ರ
# ಸಭಾ ನಡವಳಿ

ದಿನಾಂಕ: 17/07/2021 ರಂದು ಬೆಳಿಗ್ಗೆ 10.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು Zoom Meeting ಆ್ಯಪ್‌ನ ಮೂಲಕ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಆನ್‌ಲೈನ್ ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ Zoom



Scanned with CamScanner

Meeting ನಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೆಂಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರವು ಸುಮಾರು 10 ಕಿ.ಮೀ ದೂರದಲ್ಲಿರುವುದರಿಂದ ಕೋವಿಡ್-19 ವ್ಯಾಕ್ಸಿನ್ ಲಸಿಕೆಗಳನ್ನು ವಾಜರಹಳ್ಳಿಯ ಬಾಲಾಜಿ ಬಡಾವಣೆಯ ಸುತ್ತಮುತ್ತಲ ಪ್ರದೇಶಗಳಿಗೆ ಹತ್ತಿರುವಾಗುವಂತೆ ಪ್ರತಿ ದಿನ ಲಸಿಕೆಯನ್ನು ನೀಡುವಂತೆ ಲಸಿಕಾ ಕೇಂದ್ರವನ್ನು ತೆರೆಯಲು ಸಭೆಗೆ ಸೂಚಿಸಲಾಯಿತು. ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಹೊಸ ಲಸಿಕಾ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿದ್ದಲ್ಲಿ ಆರೋಗ್ಯ ಇಲಾಖೆಗೆ ಕೋರಲಾಗುವುದೆಂದು ಸಭೆಗೆ ತಿಳಿಸಿದರು.

- **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿನ ಉದ್ಯಾನವನದಲ್ಲಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವುದರ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳಲು ಪಾಲಿಕೆ ವಿದ್ಯುತ್ ವಿಭಾಗದ ಅಧಿಕಾರಿಯವರಿಗೆ ಕೋರಲಾಯಿತು.

- **ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ, ಹಾಲಿ ಮಳೆಗಾಲವಾಗಿರುವುದರಿಂದ ಗಿಡಗಳನ್ನು ನೆಡಲು ಅನೇಕ ತಳಿಯ ಸಸಿಗಳನ್ನು ನೀಡಲು ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ವಲಯದ



Scanned with CamScanner

ಅರಣ್ಯ ಇಲಾಖೆಯಲ್ಲಿ ಸಸಿಗಳನ್ನು ಪಡೆಯಬಹುದಾಗಿ ತಿಳಿಸುತ್ತಾ, ಇದಕ್ಕೆ ಸಂಬಂಧಿಸಿದ ಅಧಿಕಾರಿಗಳ ಮಾಹಿತಿಯನ್ನು ಸಭೆಗೆ ನೀಡಿದರು.

❖ <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ</u>:- 1) ವಾರ್ಡ್ ನಂ.198ರಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ 110 ಹಳ್ಳಿ ಕಾಮಗಾರಿಯಿಂದ ರಸ್ತೆಗಳು ಹಾಳಾಗಿದ್ದು ಸದರಿ ರಸ್ತೆಗಳನ್ನು ದುರಸ್ಥಿ ಪಡಿಸಲು ಸಭೆಗೆ ಕೋರಿದರು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ರಸ್ತೆ ಅಗೆಯಲಾಗಿದ್ದು ಸದರಿ ರಸ್ತೆಗಳ ದುರಸ್ಥಿಗಾಗಿ ಸರ್ಕಾರದ ಮಟ್ಟದಲ್ಲಿ ಅನುದಾನವು ಬಿಡುಗಡೆಯಾಗುವ ಹಂತದಲ್ಲಿರುವ ಬಗ್ಗೆ ತಿಳಿಸುತ್ತಾ, ಈಗಾಗಲೇ ಅಂದಾಜು ಪಟ್ಟಿ ತಯಾರಿಸುವ ಪ್ರಕ್ರಯೆ ಪ್ರಗತಿಯಲ್ಲಿರುವ ಬಗ್ಗೆ ಮತ್ತು ಟೆಂಡರ್ ಪ್ರಕ್ರಿಯೆ ಮುಕ್ತಾಯವಾದ ನಂತರ ರಸ್ತೆ ನಿರ್ಮಾಣ ಕೆಲಸವನ್ನು ಪ್ರಾರಂಭಿಸಲಾಗುವುದೆಂದು ಸಭೆಗೆ ತಿಳಸಿದರು.

2) ವಾರ್ಡ್ ನಂ.198ರಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಹಾಲಿ ಇರುವ ನೀರಿನ ಸಿ.ಐ. ವಾಲ್‌ಗಳ ದುರಸ್ಥಿ ಪಡಿಸುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಲೀಕೇಜ್ ವಾಲ್‌ಗಳಿಗೆ ಹೆಂಪ್‌ಗಳನ್ನು ಹಾಕಿ ಲೀಕೇಜ್‌ಗಳನ್ನು ನಿಲ್ಲಿಸಲಾಗಿರುತ್ತದೆಂದು ಮತ್ತು ಸಿ.ಐ. ವಾಲ್‌ಗಳ ವಾಲ್ ರಾಡ್‌ಗಳನ್ನು ಲೇಥ್‌ನಲ್ಲಿ ದುರಸ್ಥಿ ಪಡಿಸುತ್ತಿರುವ ಕಾರ್ಯ ಪ್ರಗತಿಯಲ್ಲಿರುವ ಬಗ್ಗೆ ಸಭೆಗೆ ತಿಳಿಸಿದರು.

3) ವಾರ್ಡ್ ನಂ.198ರಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಸೂರಜ್ ಗಂಗಾ ಅಪಾರ್ಟ್‌ಮೆಂಟ್ ಮುಂಭಾಗದ ಚರಂಡಿಯು ಹೂಳಿನಿಂದ ತುಂಬಿದ್ದು, ಸ್ವಚ್ಛಗೊಳಿಸಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಚರಂಡಿ ಸ್ವಚ್ಛಗೊಳಿಸುವ ಸಿಲ್ಟ್ & ಟ್ರ್ಯಾಕ್ಟರ್ ಕೆಲಸಕ್ಕೆ ಟೆಂಡರ್ ಕರೆಯಲಾಗಿದ್ದು, ಕಾರ್ಯಾದೇಶ ನೀಡುವ ಹಂತದಲ್ಲಿರುವ ಬಗ್ಗೆ ಹಾಗೂ ಆ ನಂತರ ದುರಸ್ಥಿ ಕಾರ್ಯಕೈಗೊಳ್ಳುವ ಬಗ್ಗೆ ಸಭೆಗೆ ತಿಳಿಸಿದರು.

4) ವಾರ್ಡ್ ನಂ.198ರಲ್ಲಿ ಬರುವ ಪವಮಾನಪುರದ ಪಕ್ಕದ ಬಡಾವಣೆಗಳಲ್ಲಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕೆಲಸವನ್ನು ಕೈಗೊಳ್ಳಬೇಕಾಗಿ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಅನುದಾನ ಲಭ್ಯತೆಯ ಆಧಾರದ ಮೇಲೆ ಅಭಿವೃದ್ಧಿ ಕಾರ್ಯಕೈಗೊಳ್ಳುವ ಬಗ್ಗೆ ಸಭೆಗೆ ತಿಳಿಸಿದರು.



Scanned with CamScanner

5) ವಾರ್ಡ್ ನಂ.198ರಲ್ಲಿ ಬರುವ ವಿವಿಧ ಬಡಾವಣೆಗಳಲ್ಲಿ ಇರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಸರಬರಾಜಾಗುತ್ತಿರುವ ನೀರಿನ ಗುಣಮಟ್ಟದ ಬಗ್ಗೆ ಖಾತ್ರಿಪಡಿಸಿಕೊಳ್ಳಲು ಹಾಗೂ ಗುಣಮಟ್ಟದ ಕೆಲವು ಅಂಶಗಳನ್ನು ನೀರಿನ ಘಟಕಗಳಲ್ಲಿ ಪ್ರದರ್ಶಿಸಬೇಕಾಗಿ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಸರಬರಾಜಾಗುತ್ತಿರುವ ನೀರಿನ ಗುಣಮಟ್ಟದ ಕೆಲವು ತಾಂತ್ರಿಕ ಅಂಶಗಳನ್ನು ಮತ್ತು ಇರಬೇಕಾದ ಇತಿ ಮಿತಿಗಳನ್ನು ಪ್ರಯೋಗಾಲಯಗಳಲ್ಲಿ ಪರೀಕ್ಷಿಸಿ ಸರಬರಾಜಾಗುತ್ತಿರುವ ನೀರು ಕುಡಿಯಲು ಯೋಗ್ಯವಾಗಿರುವ ಬಗ್ಗೆ ಧೃಢೀಕರಿಸಿಕೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎಸ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್–198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ.-ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner

12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner